ಕರ್ನಾಟಕ ಸರ್ಕಾರ

ಅರಣ್ಯ ಇಲಾಖೆ

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ
ಇವರ ಕಚೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು–560003

**240 ಅರಣ್ಯ ರಕ್ಷಕ ಮತ್ತು 329 ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರರ ಹುದ್ದೆಗಳಿಗೆ ನೇರ ನೇಮಕಾತಿ 2018–19**

**ಅಧಿಸೂಚನೆ ಸಂಖ್ಯೆ: ಬಿ9–ನೇಮಕಾತಿ–ಎಿವ–1/2017–18 ದಿನಾಂಕ: 10–04–2017 ಹಾಗೂ ಅಧಿಸೂಚನೆ ಸಂಖ್ಯೆ: ಬಿ9–ನೇಮಕಾತಿ–ಎಿವ–2/2017–18 ದಿನಾಂಕ: 10–04–2017**

## ಪ್ರಕಟಣೆ

ದಿನಾಂಕ: 06.09.2019 ರಂದು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಅಂತಿಮ ಕಾಯುವಿಕೆ ಪಟ್ಟಿಯಲ್ಲಿರುವ ಎಲ್ಲಾ ಅಭ್ಯರ್ಥಿಗಳು ದಿನಾಂಕ: 16.09.2019 ರಂದು ಬೆಳಿಗ್ಗೆ 10.00 ಗಂಟೆಗೆ ಅರಣ್ಯ ಸಂರಕ್ಷಣಾಧಿಕಾರಿ, ಮೈಸೂರು ವೃತ್ತ, ಮೈಸೂರು (ಅರಣ್ಯ ಭವನ, ಅಶೋಕಪುರಂ, ಮೈಸೂರು – 570008) ಇವರ ಸಮ್ಮುಖ ಎಲ್ಲಾ ಮೂಲ ದಾಖಲೆಗಳೊಂದಿಗೆ ಮೂಲ ದಾಖಲೆಗಳ ಪರಿಶೀಲನೆ ಮತ್ತು ವೈದ್ಯಕೀಯ ಪರೀಕ್ಷೆಗೆ ಹಾಜರಾಗತ್ತಕ್ಕದು ಮತ್ತು ಇತ್ತೀಚಿನ ಎರಡು ಭಾವಚಿತ್ರ ಹಾಗೂ ಸರ್ಕಾರವು ನಿಗಧಿಪಡಿಸಿರುವ ಯಾವುದಾದರೂ ಅಧಿಕೃತ ಗುರುತಿನ ಚೀಟಿಯೊಂದಿಗೆ ಖುದ್ದು ಹಾಜರಾಗತಕ್ಕದ್ದು.

ನಿಗಧಿತ ದಿನಾಂಕದಂದು ಹಾಜರಾಗದೇ ಇರುವ ಅಭ್ಯರ್ಥಿಗಳನ್ನು ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು ಹಾಗೂ ಯಾವುದೇ ಕಾರಣಕ್ಕೂ ಯಾವುದೇ ಸನ್ನಿವೇಶದಲ್ಲೂ ಕಾಲ ವಿಸ್ತೀರ್ಣ ನೀಡಲಾಗುವುದಿಲ್ಲ ಮತ್ತು ನಿಗಧಿಪಡಿಸಿರುವ ಎಲ್ಲಾ ಮೂಲ ದಾಖಲೆಗಳನ್ನು ಇಲಾಖಿ ವಶ ಹಾಜರುಪಡಿಸುವುದು.

ನಿಗಧಿತ ವೈದ್ಯಕೀಯ ಪರೀಕ್ಷೆಯು ಒಂದು ದಿನ ಅಥವಾ ಅದಕ್ಕಿಂತ ಹೆಚ್ಚಿನ ದಿನ ಅಥವಾ ವೈದ್ಯಾಧಿಕಾರಿಗಳು ಮುಂದೆ ನಿಗಧಿಪಡಿಸಬಹುದಾದ ಯಾವುದಾದರೂ ಒಂದು ದಿನಾಂಕದಲ್ಲಿ ನಡೆಯುವ ಸಾಧ್ಯತೆ ಇರುವುದರಿಂದ ಎಲ್ಲಾ ಪೂರ್ವ ಸಿದ್ದತೆಯನ್ನು ಮಾಡಿಕೊಳ್ಳತಕ್ಕದ್ದು. ಇಲಾಖಾ ವತಿಯಿಂದ ಯಾವುದೇ ರೀತಿಯ ಪ್ರಯಾಣ ಭತ್ಯೆ ಇತ್ಯಾದಿಗಳನ್ನು ನೀಡಲಾಗುವುದಿಲ್ಲ.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ)

ದಿನಾಂಕ: 07–09–2019
ಸ್ಥಳ: ಬೆಂಗಳೂರು